# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಮೂರನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಸೋಮವಾರ, ದಿನಾಂಕ:22ನೇ ಜುಲೈ, 2024**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

ಆ) **<u>ತಡೆಹಿಡಿಯಲಾದ ಪ್ರಶ್ನೆ:</u>**

1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀಮತಿ ಹೇಮಲತಾ ನಾಯಕ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 3(120) — ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

### 02. ಶೂನ್ಯವೇಳೆ ಪ್ರಸ್ತಾವಗಳು

### 03. ನಿಯಮ 68ರ ಮೇರೆಗೆ ನಡೆದ ಚರ್ಚೆಗೆ ಸರ್ಕಾರದಿಂದ ಉತ್ತರ

| | |
|---|---|
| **ಶ್ರೀಯುತರುಗಳಾದ:–**<br>**ಎನ್. ರವಿಕುಮಾರ್, ಸಿ.ಟಿ. ರವಿ, ಡಿ.ಎಸ್. ಅರುಣ್, ಭಾರತಿ ಶೆಟ್ಟಿ, ಎಸ್.ವ್ಹಿ. ಸಂಕನೂರ ಹಾಗೂ ಇತರರು** | ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ಸಮುದಾಯದ ಅಭಿವೃದ್ಧಿಗೆ ಮೀಸಲಾಗಿದ್ದ ಹಣ ದುರುಪಯೋಗವಾಗಿರುವ ಕುರಿತು ನಡೆದ ಚರ್ಚೆಗೆ ಸರ್ಕಾರದಿಂದ ಉತ್ತರ |

### 04. ಗಮನ ಸೆಳೆಯುವ ಸೂಚನೆಗಳು

01. **ಶ್ರೀಯುತರುಗಳಾದ ಛಲವಾದಿ ಟಿ. ನಾರಾಯಣಸ್ವಾಮಿ, ಸಿ.ಟಿ. ರವಿ, ಕೇಶವ ಪ್ರಸಾದ್ ಎಸ್, ಸುನೀಲ್ ವಲ್ಯಾಪುರ್, ಡಾ: ಧನಂಜಯ ಸರ್ಜಿ, ಭಾರತಿ ಶೆಟ್ಟಿ ಹಾಗೂ ಇತರರು** ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಅಭಿವೃದ್ಧಿಯ ಉಪ ಯೋಜನೆಗಳಿಗೆ ಮೀಸಲಿಡಲಾಗಿದ್ದ ಹಣವನ್ನು ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಬಳಕೆ ಮಾಡಿರುವ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ಡಿ.ಎಸ್. ಅರುಣ್** ಅವರು 2022–23ನೇ ಸಾಲಿನ ಆರ್ಥಿಕ ವರ್ಷದಲ್ಲಿ ಎಲ್ಲಾ ಲೆಕ್ಕಶೀರ್ಷಿಕೆಗಳಿಗೆ ಹಂಚಿಕೆಯಾದ ಹಣದಲ್ಲಿ ಬಳಕೆಯಾಗದೆ ಉಳಿದ ಅನುದಾನವನ್ನು ಸಂಚಿತ ನಿಧಿಗೆ ವರ್ಗಾವಣೆಗೊಳಿಸದೆ ಅಮಾನತ್ತು ಖಾತೆಯಲ್ಲೆ ಉಳಿಸಿರುವ ವಿಚಾರದ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦3. **ಶ್ರೀ ಐವನ್ ಡಿ'ಸೋಜಾ** ಅವರು 1987ರಿಂದ 1994 ಮತ್ತು 95ನೇ ಶೈಕ್ಷಣಿಕ ಸಾಲಿನ ಒಳಗೆ ಪ್ರಾರಂಭವಾಗಿರುವ 118 ಶಾಲೆಗಳಿಗೆ ಸೀಮಿತವಾಗಿ ವಿಶೇಷ ಪ್ರಕರಣವೆಂದು ಪರಿಗಣಿಸಿ ಆದೇಶವಾಗಿದ್ದರೂ ಅವುಗಳಲ್ಲಿ 07 ಶಾಲೆಗಳನ್ನು ವೇತನಾನುದಾನಕ್ಕೆ ಒಳಪಡಿಸದೇ ಇರುವ ಕುರಿತು ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

೦4. **ಶ್ರೀ ಪುಟ್ಟಣ್ಣ** ಅವರು ರಾಜ್ಯದಲ್ಲಿ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳು ರಾಜ್ಯ ಪಠ್ಯಕ್ರಮದಲ್ಲಿ ಅನುಮತಿ ಪಡೆದು ಕೇಂದ್ರ ಪಠ್ಯಕ್ರಮದ ಅನುಮತಿಗಾಗಿ ಪ್ರಸ್ತಾವನೆ ಸಲ್ಲಿಸಿರುವ ಶಾಲೆಗಳನ್ನು ಅನಧಿಕೃತ ಶಾಲೆಗಳೆಂದು ಘೋಷಿಸುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗುತ್ತಿರುವ ಕುರಿತು ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

೦5. **ಶ್ರೀ ಗೋವಿಂದರಾಜು** ಅವರು ಕೋಲಾರ ನಗರದ ಅಂತರಗಂಗೆ ಮುಖ್ಯ ರಸ್ತೆಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕಟ್ಟಡವು ಸುಮಾರು 60 ವರ್ಷಗಳ ಹಳೆಯದಾಗಿರುವುದರಿಂದ ಸದರಿ ಶಾಲಾ ಕಟ್ಟಡವನ್ನು ಪುನಃಶ್ಚೇತನಗೊಳಿಸಲು ಅನುದಾನ ಮಂಜೂರು ಆಗಿದ್ದರು ಅನುದಾನ ಬಿಡುಗಡೆ ಮಾಡದಿರುವ ಕುರಿತು ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

೦6. **ಶ್ರೀಯುತರುಗಳಾದ ಸಿ.ಟಿ. ರವಿ, ಎನ್. ರವಿಕುಮಾರ್, ಛಲವಾದಿ ಟಿ. ನಾರಾಯಣಸ್ವಾಮಿ, ಪ್ರತಾಪ್ ಸಿಂಹ ನಾಯಕ್ ಕೆ., ಭಾರತಿ ಶೆಟ್ಟಿ, ಕೇಶವ ಪ್ರಸಾದ್ ಎಸ್ ಹಾಗೂ ಪಿ.ಹೆಚ್. ಪೂಜಾರ್** ಅವರುಗಳು ಪಶ್ಚಿಮಘಟ್ಟ ಮಲೆನಾಡು ಹಾಗೂ ಕರಾವಳಿ ಪ್ರದೇಶಗಳಲ್ಲಿ ಉಂಟಾಗುತ್ತಿರುವ ಭೂಕುಸಿತಕ್ಕೆ ಕಾರಣಗಳೇನು ಎಂಬ ಕುರಿತು ವೈಜ್ಞಾನಿಕವಾಗಿ ಅಧ್ಯಯನ ನಡೆಸಿ ಪಶ್ಚಿಮಘಟ್ಟಗಳ ಸಂರಕ್ಷಣೆಗೆ ಕ್ರಮವಹಿಸುವುದರ ಜೊತೆಗೆ ರಸ್ತೆ ಅಭಿವೃದ್ಧಿ/ನಿರ್ವಹಣೆ ಹಾಗೂ ಬೆಳೆ ಹಾನಿಗೆ ವಿಶೇಷ ಪ್ಯಾಕೇಜ್ ನಿಗದಿ ಮಾಡುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦7. **ಶ್ರೀ ಪ್ರಕಾಶ್ ಕೆ. ರಾಥೋಡ್** ಅವರು ಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸನ್ನು ನನಸಾಗಿಸಲು ಗ್ರಾಮ ಪಂಚಾಯತಿಗಳು ಗ್ರಾಮ ಸರ್ಕಾರಗಳಾಗಿ, ತಾಲ್ಲೂಕು ಪಂಚಾಯತಿಗಳು, ತಾಲ್ಲೂಕು ಸರ್ಕಾರಗಳಾಗಿ, ಜಿಲ್ಲಾ ಪಂಚಾಯತಿಗಳು ಜಿಲ್ಲಾ ಸರ್ಕಾರಗಳಾಗಿ ಕಾರ್ಯನಿರ್ವಹಿಸಲು ಎಲ್ಲಾ ಅಧಿಕಾರ, ಹಣಕಾಸು ಮತ್ತು ಅಧಿಕಾರಿಗಳನ್ನು ಹಸ್ತಾಂತರಗೊಳಿಸಲು ಪಂಚಾಯತ್ ರಾಜ್ ಕಾನೂನನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸಿ ಅಮೃತ ಮಹೋತ್ಸವ ಆಚರಿಸುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

೦1. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ರಾಜ್ಯದ ಇತರೆ ಭಾಗಗಳಿಂದ ಕರಾವಳಿಗೆ ಸಂಪರ್ಕ ಕೊಂಡಿಯಾಗಿರುವ ಘಾಟಿ ಪರಿಸರದಲ್ಲಿ ಬರುವ ಹೆದ್ದಾರಿಯಲ್ಲಿ ಹೆಚ್ಚು ಮಳೆಯಿಂದಾಗಿ ರಸ್ತೆ ಕುಸಿತದಿಂದ ಸಂಚಾರ ವ್ಯತ್ಯಯ ಉಂಟಾಗುತ್ತಿರುವುದನ್ನು ತಪ್ಪಿಸಲು ಶಾಶ್ವತ ಮತ್ತು ದೀರ್ಘಕಾಲಿಕ ಉಪಯೋಗದ ಯೋಜನೆಯನ್ನು ಸರ್ಕಾರ ರೂಪಿಸದಿರುವ ಕುರಿತು ಪ್ರಸ್ತಾಪಿಸುವುದು.

೦೨. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು ಭೂರಹಿತರಿಗೆ ಹಾಗೂ ಬಡರೈತರಿಗೆ ಸರ್ಕಾರ ನೀಡಿರುವ ಭೂಮಿಗೆ ಪಹಣಿಯಲ್ಲಿ ಪಿ.ನಂ. ನಮೂದಿಸದಿರುವುದರಿಂದ ಹಾಗೂ ಸದರಿ ಭೂಮಿಯನ್ನು ಇತರರಿಗೆ ಪರಭಾರೆ ಮಾಡಲು ವಿಧಿಸಿರುವ ನಿರ್ಬಂಧವನ್ನು ಸಡಿಲಿಸದೆ ಇರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

೦೩. **ಶ್ರೀ ಯು.ಬಿ. ವೆಂಕಟೇಶ್** ಅವರು ಯುನೋಕಾಯಿನ್ ಟೆಕ್ನಾಲಾಜೀಸ್ ಕಂಪನಿ ಸರ್ವರ್ ಹ್ಯಾಕ್ ಮಾಡಿ ಕೋಟ್ಯಾಂತರ ರೂಪಾಯಿ ಮೌಲ್ಯದ ಬಿಟ್ ಕಾಯಿನ್ ಕಳ್ಳತನ ಮಾಡಿದ ಸಂಘಟಿತ ಕೃತ್ಯದಲ್ಲಿನ ಆಪಾದಿತರು ಮತ್ತು ಹಗರಣದ ಬಗ್ಗೆ ಪ್ರಗತಿಯಲ್ಲಿರುವ ಸಿ.ಐ.ಡಿ. ವಿಚಾರಣೆ ಮತ್ತು ವರದಿ ಕುರಿತು ಪ್ರಸ್ತಾಪಿಸುವುದು.

೦೪. **ಶ್ರೀ ಪಿ.ಹೆಚ್. ಪೂಜಾರ್ ಹಾಗೂ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರುಗಳು ಕೃಷ್ಣ ಮೇಲ್ದಂಡೆ ಯೋಜನೆಯ 3ನೇ ಹಂತದ ಕಾಮಗಾರಿಯನ್ನು ಪೂರ್ಣಗೊಳಿಸುವ ಕುರಿತು ಪ್ರಸ್ತಾಪಿಸುವುದು.

೦೫. **ಶ್ರೀಯುತರುಗಳಾದ ಡಾ: ಧನಂಜಯ ಸರ್ಜಿ, ಶ್ರೀ ಎಸ್.ವ್ಹಿ. ಸಂಕನೂರ, ಕೆ.ಎ. ತಿಪ್ಪೇಸ್ವಾಮಿ, ಶಶೀಲ್ ಜಿ. ನಮೋಶಿ, ಗೋವಿಂದರಾಜು ಹಾಗೂ ಡಾ: ತಳವಾರ್ ಸಾಬಣ್ಣ** ಅವರುಗಳು ರಾಜ್ಯಾದ್ಯಂತ ಡೆಂಗ್ಯೂ ಖಾಯಿಲೆ ವ್ಯಾಪಕವಾಗಿ ಹರಡುತ್ತಿದ್ದು, ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಕುರಿತು ಪ್ರಸ್ತಾಪಿಸುವುದು.

೦೬. **ಶ್ರೀ ಎಸ್.ವ್ಹಿ. ಸಂಕನೂರ ಹಾಗೂ ಶ್ರೀ ಪುಟ್ಟಣ್ಣ** ಅವರುಗಳು ರಾಜ್ಯದ ಖಾಸಗಿ ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ತೆರವಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಉಚ್ಛನ್ಯಾಯಾಲಯ ತೀರ್ಪು ನೀಡಿದರೂ ಸಹ ಸರ್ಕಾರ ಅನುಮತಿಸದಿರುವುದರಿಂದ ಉಂಟಾಗಿರುವ ದುಷ್ಪರಿಣಾಮಗಳ ಕುರಿತು ಪ್ರಸ್ತಾಪಿಸುವುದು.

೦೭. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ದೇವನಹಳ್ಳಿ ತಾಲ್ಲೂಕು ಹರಳೂರಿನಲ್ಲಿ ಕೆಐಎಡಿಬಿ ಅಭಿವೃದ್ಧಿ ಪಡಿಸಿರುವ ಹೈಟೆಕ್ ಏರೋಸ್ಪೇಸ್ ಮತ್ತು ಡಿಫೆನ್ಸ್ ಪಾರ್ಕ್‌ನ 2ನೇ ಹಂತದಲ್ಲಿ ವಿಶ್ವವಿದ್ಯಾಲಯ ಸ್ಥಾಪನೆಗಾಗಿ ಮೆ: ಸೆಂಟರ್ ಫಾರ್ ಎಜುಕೇಷನ್ ಅಂಡ್ ಸೋಷಿಯಲ್ ಸ್ಟಡೀಸ್ ರವರಿಗೆ 116.16 ಎಕರೆ ಜಮೀನನ್ನು 99 ವರ್ಷದ ಗುತ್ತಿಗೆಗೆ ಶೈಕ್ಷಣಿಕ ಅಭಿವೃದ್ಧಿ/ವಿಶ್ವವಿದ್ಯಾಲಯ ಆರಂಭಕ್ಕೆ ಕ್ಯಾಬಿನೆಟ್ ಅನುಮತಿ ನೀಡಿರುವುದರ ಬದಲಾಗಿ 10 ವರ್ಷಗಳ ಗುತ್ತಿಗೆ ಕಮ್ ಮಾರಾಟ ಮಾಡುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**